# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 647 |
| ಸದಸ್ಯರ ಹೆಸರು: | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವವರು: | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ: | : | 13/03/2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸುಮಾರು 70 ಸಾವಿರ ಅಂಗನವಾಡಿ ಕೇಂದ್ರಗಳಿಗೆ ಪೂರೈಕೆಯಾಗುತ್ತಿರುವ ಆಹಾರದ ಗುಣಮಟ್ಟ ನಿಯಂತ್ರಣ ವ್ಯವಸ್ಥೆ ಹದಗಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಆಹಾರ ಪದಾರ್ಥಗಳನ್ನು ವಿತರಿಸುವ ಮುನ್ನ, ಅವುಗಳಲ್ಲಿನ ಪೌಷ್ಟಿಕಾಂಶಗಳ ಗುಣಮಟ್ಟ ಮತ್ತು ನಿಯತಾಂಕಗಳನ್ನು National Accreditation Board for Testing and Calibration Laboratories (NABL) ನೋಂದಾಯಿತ ಪ್ರಯೋಗಾಲಯಗಳ ಮೂಲಕ ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಲಾಗುತ್ತಿದೆ. ಕೇಂದ್ರ ಸರ್ಕಾರ ನಿಗದಿಪಡಿಸಿದ ಕ್ಯಾಲೋರಿ ಮತ್ತು ಪ್ರೋಟೀನ್ ಒಳಗೊಂಡಂತೆ, ಹಾಗೂ Defence Food Research Laboratories (DFRL), ಮೈಸೂರು ಅನುಮೋದಿಸಿದ ಮೆನುವಿನಂತೆ ಉತ್ತಮ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರವನ್ನು ಎಂ.ಎಸ್.ಪಿ.ಸಿ.ಗಳ ಮೂಲಕ ಅಂಗನವಾಡಿಗಳಿಗೆ ಸರಬರಾಜು ಮಾಡಲಾಗುತ್ತಿದೆ ಹಾಗೂ ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಹಾಗೂ ಎಂ.ಎಸ್.ಪಿ.ಸಿ.ಗಳಿಂದ ಪ್ರತಿ ತಿಂಗಳು ಆಹಾರದ ಗುಣಮಟ್ಟದ ಪರೀಕ್ಷೆಯನ್ನು ನಡೆಸಲಾಗುತ್ತಿದೆ.<br><br>ಅಲ್ಲದೇ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ FSSAI ಪ್ರಯೋಗಾಲಯಗಳ ಮೂಲಕವೂ ಅಂಗನವಾಡಿ ಕೇಂದ್ರಗಳಿಂದ ಆಹಾರದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷಿಸಲಾಗುತ್ತಿದ್ದು, ಆಹಾರದ ಗುಣಮಟ್ಟದ ಕುರಿತು ಈವರೆಗೆ ಯಾವುದೇ ಪ್ರತಿಕೂಲ ವರದಿಗಳು ಸ್ವೀಕೃತವಾಗಿರುವುದಿಲ್ಲ. |
| ಆ) | ಆಹಾರ ಗುಣಮಟ್ಟ ಪರೀಕ್ಷೆ ನಿಯಮಿತವಾಗಿ ನಡೆಯದಿರಲು ಮತ್ತು ಸರಬರಾಜುದಾರರ ಆಯ್ಕೆಯಲ್ಲಿ ಪಾರದರ್ಶಕತೆ ಇಲ್ಲದಿರಲು ಕಾರಣಗಳೇನು; | ಆಹಾರ ಗುಣಮಟ್ಟ ಪರೀಕ್ಷೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಹಾಗೂ ಮಹಿಳಾ ಪೂರಕ ಪೌಷ್ಟಿಕ ಉತ್ಪಾದನಾ ಕೇಂದ್ರಗಳಿಂದ (ಎಂ.ಎಸ್.ಪಿ.ಸಿ.) ಪ್ರತಿ ತಿಂಗಳು National Accreditation Board for Testing and Calibration Laboratories (NABL) ನೋಂದಾಯಿತ ಪ್ರಯೋಗಾಲಯಗಳ ಮೂಲಕ ನಡೆಸಲಾಗುತ್ತಿದೆ.<br><br>ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ: 07-10-2004ರ ಆದೇಶದ ಸೂಚನೆಯಂತೆ 2008 ರಿಂದ ಇಲ್ಲಿಯವರೆಗೆ ಯಾವುದೇ ಗುತ್ತಿಗೆದಾರರಿಲ್ಲದೆ ಸರ್ಕಾರದ ವತಿಯಿಂದಲೇ ಸ್ಥಾಪಿಸಲಾದ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಕೇಂದ್ರ (ಎಂ.ಎಸ್.ಪಿ.ಸಿ.) ಗಳಿಂದ ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿನ ಫಲಾನುಭವಿಗಳಿಗೆ ಪೂರಕ ಪೌಷ್ಟಿಕ ಆಹಾರವನ್ನು ಸರಬರಾಜು ಮಾಡಲಾಗುತ್ತಿದೆ. |

| | | |
|---|---|---|
| ಇ) | ಪೋಷಣಾ ಅಭಿಯಾನದಡಿ ಮಕ್ಕಳಿಗೆ ನೀಡುವ ಆಹಾರದ ಗುಣಮಟ್ಟ ಪರೀಕ್ಷಾ ವರದಿಗಳನ್ನು ಸಾರ್ವಜನಿಕ ಪರಿಶೀಲನೆಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? | ಅಂಗನವಾಡಿ ಕೇಂದ್ರಗಳಲ್ಲಿ ವಿತರಿಸುವ ಆಹಾರದ ಗುಣಮಟ್ಟದ ಪರೀಕ್ಷಾ ವರದಿಗಳನ್ನು ಸಾರ್ವಜನಿಕರ ಪರಿಶೀಲನೆಗೆ ಲಭ್ಯವಾಗುವಂತೆ ಮಾಡಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿವೆ:<br>1. ಅಂಗನವಾಡಿ ಕೇಂದ್ರಗಳಲ್ಲಿ ನೀಡಲಾಗುವ ಪೂರಕ ಪೌಷ್ಟಿಕ ಆಹಾರದ ವಿವರಗಳನ್ನು ಕೇಂದ್ರ ಸರ್ಕಾರದ ಪೋಷಣ್ ಟ್ರ್ಯಾಕರ್ ಅಪ್ಲಿಕೇಷನ್‌ನಲ್ಲಿ ದಾಖಲಿಸಲಾಗುತ್ತದೆ.<br>2. ಪೋಷಕರು, ಸ್ಥಳೀಯರು ಮತ್ತು ಬಾಲ ವಿಕಾಸ ಸಮಿತಿಗಳ ಸದಸ್ಯರಿಗೆ ಆಹಾರದ ಗುಣಮಟ್ಟವನ್ನು ಹಾಗೂ ಸಂಬಂಧಪಟ್ಟ ವರದಿಗಳನ್ನು ನೇರವಾಗಿ ಪರೀಕ್ಷಿಸಲು ಅವಕಾಶವನ್ನು ಕಲ್ಪಿಸಲಾಗಿದೆ. |

**ಸಂಖ್ಯೆ: ಮಮಇ 66 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.